# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ ಅಂಕೋಲಾ

**ಸಿಸಿ ನಂಬರ 80/2024**

| | |
|---|---|
| ಆರೋಪಿಯ ಹೆಸರುಃ | ರಾಜು |
| ತಂದೆಯ ಹೆಸರುಃ | ಗೋವಿಂದ ಗೌಡ |
| ವಯಸ್ಸುಃ | 40 ವರ್ಷ |
| ಉದ್ಯೋಗಃ | ವ್ಯವಹಾರ |
| ವಿಳಾಸಃ | ಸಾಃ ಅಂಬರಕೊಡ್ಲ, ತಾಃ ಅಂಕೋಲಾ |

## ಪ್ರಕ್ರಿಯಾ ಸಂಹಿತೆ ಕಲಂ 313 ರೀತ್ಯಾ ಆರೋಪಿಯ ಹೇಳಿಕೆ

ಪ್ರ 1: ನೀನು ಅಭಿಯೋಜನೆಯ ಪರ ಹಾಜರುಪಡಿಸಿರುವ ಸಾಕ್ಷಿಗಳ ಹೇಳಿಕೆ ಕೇಳಿದ್ದಿಯಾ?
ಉತ್ತರಃ

ಪ್ರ 2ಃ ಫಿರ್ಯಾದಿ ಕಾಮಧೇನು ಕ್ರೆಡಿಟ್ ಕೋ-ಆಪರೇಟವ್ ಸೊಸೈಟಿ ಲಿ., ಶಾಃ ಅಂಕೋಲಾ, ಇದನ್ನು ಪ್ರತಿನಿಧಿಸುವ ಪಿಡಬ್ಲ್ಯೂ 1- ರಾಜು ತಿಮ್ಮಣ್ಣ ಹರಿಕಂತ್ರ ಇವರು ತಮ್ಮ ಸಾಕ್ಷಿಯಲ್ಲಿ ಪ್ರಕಾಶ ಬೊಮ್ಮಯ್ಯ ನಾಯ್ಕ ಎನ್ನುವವರು ಫಿರ್ಯಾದಿ ಸೊಸೈಟಿಯಿಂದ ದಿನಾಂಕಃ 31-3-2022 ರಂದು ರೂ. 50,000/- ಸಾಲವನ್ನು ಪಡೆದಿದ್ದು, ಆರೋಪಿತನು ವ ಆತನ ಜಾಮಿನುದಾರರು ಒಪ್ಪಿ ಆರೋಪಿಯು ಎಲ್ಲಾ ಸಾಲ ಪತ್ರಗಳಿಗೆ ಮತ್ತು ಕರಾರಿಗೆ ಮತ್ತು ಜಾಮೀನು ಪತ್ರಕ್ಕೆ ಸಹಿ ಮಾಡಿಕೊಟ್ಟಿರುತ್ತಾರೆ. ಸದರಿ ಸಾಲದ ಕರಾರುಗಳ ಪ್ರಕಾರ ಸಾಲದ ಹಣವನ್ನು ಮರುಪಾವತಿ ಮಾಡಿಸುವಷ್ಟು ಹಣ ಇದೆ ಎಂದು ನಂಬಿಸಿ ರೂ. 71,550/- ಹಣ ತುಂಬುವುದು ಬಾಕಿ ಇದ್ದಾಗ, ಆರೋಪಿತನು ದಿನಾಂಕಃ 27-11-2023 ರಂದು ತಾನು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಶಾಖೆಃ ಅಂಕೋಲಾ ರವರಲ್ಲಿ ಹಣದ ಉಳಿತಾಯ ಖಾತೆ ಅಡಿಯಲ್ಲಿ ಚೆಕ್ ನಂಬರ 020699 ನ್ನು ರೂ.71,550/- ಕ್ಕೆ ನೀಡಿರುತ್ತಾನೆ. ಸದರಿ ಆರೋಪಿ

ನೀಡಿದ ಚೆಕ್ಕು ಖಾತೆಯಲ್ಲಿ **“ Funds Insufficient"** ಎಂದು ಹಿಂಬರಹದೊಂದಿಗೆ ಪರತ್ ಬಂದಿರುತ್ತದೆ. ಈ ಕುರಿತಾಗಿ ಆರೋಪಿತನಿಗೆ ಮುಂಚಿತವಾಗಿ ನೋಟೀಸು ನೀಡಿದರೂ ಸಹ ಹಣ ಮರು ಪಾವತಿಸದೇ ಎನ್ ಐ ಆ್ಯಕ್ಟ್ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರ 3ಃ ಈ ಪ್ರಕರಣದಲ್ಲಿ ಮತ್ತೇನಾದರೂ ಹೇಳುವುದಿದೆಯಾ?

ಉತ್ತರಃ

ಪ್ರ 4ಃ ನಿಮ್ಮ ಪರವಾಗಿ ಸಾಕ್ಷಿ ಮಾಡಿಸುತ್ತೀಯಾ ಹಾಗೂ ಏನಾದರೂ ಕಾಗದ ಪತ್ರವನ್ನು ಹಾಜರುಪಡಿಸುತ್ತೀಯಾ?

ಉತ್ತರಃ

( ಆರೋಪಿಗೆ ಮೇಲಿನ ಪ್ರಶ್ನೆಗಳನ್ನು ಆತನಿಗೆ ತಿಳಿಯುವ ಭಾಷೆಯಲ್ಲಿ ವಿವರಿಸಲಾಗಿ ಅವರು ಕೊಟ್ಟಿರುವ ಉತ್ತರವನ್ನೇ ಬಹಿರಂಗ ನ್ಯಾಯಾಲಯದಲ್ಲಿ ಪಡೆದುಕೊಳ್ಳಲಾಯಿತು.)

Sd/-

ದಿನಾಂಕಃ05/07/2024.

**( ಪ್ರಶಾಂತ ಬಾದವಾಡಗಿ)**
**ಪ್ರ ದ ನ್ಯಾದಂ, ಅಂಕೋಲಾ.**